MediaTAR
...Tracking, Analysis & Reportage

| | | | |
|---|---|---|---|
| **PUBLICATION** | Kannada Prabha | **DATE** | 11.02.2019 |
| **EDITION** | Bangalore | **PAGE NO** | 04 |
| **HEADLINE** | Ultimate aim of Education is not Employment, but Empowerment & Enlightenment, says Honourable Vice President of India, M. Venkaiah Naidu | | |

# ‘ವಿಶ್ವಗುರು ಸ್ಥಾನ ಪಡೆಯಲು ಶಿಕ್ಷಣ ಸಂಸ್ಥೆಗಳು ಶ್ರಮಿಸಲಿ’

## ಪ್ರತಿಭೆ ಗುರುತಿಸಿ ಪ್ರೋತ್ಸಾಹ, ಕೌಶಲ್ಯ ನೀಡುವಲ್ಲಿ ಸೋತ ವಿವಿಗಳು: ಉಪರಾಷ್ಟ್ರಪತಿ ವೆಂಕಯ್ಯನಾಯ್ಡು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ದೇಶದಲ್ಲಿರುವ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹ ಮತ್ತು ಕೌಶಲ್ಯ ನೀಡುವಲ್ಲಿ ವಿಶ್ವವಿದ್ಯಾಲಯಗಳು ಸೋತಿವೆ. ಹಿಂದೆ ಜ್ಞಾನ ಮತ್ತು ಶಿಕ್ಷಣದಲ್ಲಿ ವಿಶ್ವಗುರು ಎಂಬ ಸ್ಥಾನ ಪಡೆದಿದ್ದ ಭಾರತ ಮತ್ತೆ ಆ ಸ್ಥಾನ ಮರಳಿ ಪಡೆಯಲು ಎಲ್ಲ ಶಿಕ್ಷಣ ಸಂಸ್ಥೆಗಳು ಶ್ರಮಿಸಬೇಕಿದೆ ಎಂದು ಉಪರಾಷ್ಟ್ರಪತಿ ವೆಂಕಯ್ಯನಾಯ್ಡು ಅಭಿಪ್ರಾಯ ವ್ಯಕ್ತಪಡಿಸಿದರು.

ಹೆಣ್ಣೂರು-ಬಾಗಲೂರು ರಸ್ತೆಯಲ್ಲಿ ನಿರ್ಮಿಸಲಾಗಿರುವ ಸಿಎಂಆರ್ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್ ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವದ ಮೊದಲ ವಿವಿಯಾಗಿದ್ದ ತಕ್ಷಶಿಲಾದಲ್ಲಿ 65 ಕೋರ್ಸ್‌ಗಳನ್ನು ಪರಿಚಯಿಸಿತ್ತು. ಆ ಕಾಲದಲ್ಲೇ 10 ಸಾವಿರಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದರು. ನಳಂದ ವಿಶ್ವವಿದ್ಯಾಲಯ ಬೃಹತ್ ಗ್ರಂಥಾಲಯವನ್ನೇ ಹೊಂದಿತ್ತು. ಇಂದು ಜಾಗತಿಕ ಮಟ್ಟದಲ್ಲಿ ಹೆಚ್ಚು ವಿದ್ಯಾಸಂಸ್ಥೆಗಳನ್ನು ಹೊಂದಿರುವ ದೇಶದಲ್ಲಿ ಭಾರತ ಕೂಡ ಒಂದಾಗಿದೆ ಎಂದರು.

ನ್ಯಾಷನಲ್ ಪಬ್ಲಿಕ್ ಶಾಲೆಯ ಅಧ್ಯಕ್ಷ ಡಾ. ಕೆ.ಪಿ. ಗೋಪಾಲಕೃಷ್ಣ ಮಾತನಾಡಿ, ದೇಶದಲ್ಲಿ ಸಾವಿರಾರು ವಿದ್ಯಾರ್ಥಿಗಳು ವಿದೇಶಕ್ಕೆ ತೆರಳುತ್ತಿದ್ದಾರೆ, ವಿದೇಶಗಳಲ್ಲಿರುವ ಸೌಲಭ್ಯಗಳು ನಮ್ಮಲ್ಲಿಯೂ ದೊರೆತರೆ ಹೆಚ್ಚಿನ ವಿದ್ಯಾರ್ಥಿಗಳು ಇಲ್ಲಿಯೇ ಶಿಕ್ಷಣ ಮುಂದುವರಿಸಲಿದ್ದಾರೆ ಎಂದರು.

ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಹಾಗೂ ರಾಜ್ಯಸಭಾ ಸದಸ್ಯ ಕೆ.ಸಿ. ರಾಮಮೂರ್ತಿ, ಸಿಎಂಆರ್ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ. ಸಬಿತಾ ರಾಮಮೂರ್ತಿ ಉಪಸ್ಥಿತರಿದ್ದರು.




ಹೆಣ್ಣೂರು-ಬಾಗಲೂರು ರಸ್ತೆಯಲ್ಲಿ ನಿರ್ಮಿಸಲಾಗಿರುವ ಸಿಎಂಆರ್ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್‌ನ್ನು ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಭಾನುವಾರ ಉದ್ಘಾಟಿಸಿದರು. ರಾಜ್ಯಸಭಾ ಸದಸ್ಯ ಕೆ.ಸಿ. ರಾಮಮೂರ್ತಿ, ಸಿಎಂಆರ್ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ. ಸಬಿತಾ ರಾಮಮೂರ್ತಿ ಉಪಸ್ಥಿತರಿದ್ದರು.